ದೂರವಾಣಿ ಸಂಖ್ಯೆ : 2419677/2419361
ಫ್ಯಾಕ್ಸ್: 0821-2419363/2419301

e-mail registrar@uni-mysore.ac.in
www.uni-mysore.ac.in

ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ : 1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು-570005

ಎಸಿ2(ಎಸ್)/18/2022-23

ದಿನಾಂಕ: 17.10.2023.

## ಸುತ್ತೋಲೆ

**ವಿಷಯ:-** 2023-24ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡುವ ಬಗ್ಗೆ.

**ಉಲ್ಲೇಖ:-** ಸಹಾಯಕ ನಿರ್ದೇಶಕರು ಗ್ರೇಡ್-1, ಸಮಾಜ ಕಲ್ಯಾಣ ಇಲಾಖೆ, ಮೈಸೂರು ತಾಲ್ಲೂಕು, ಮೈಸೂರು ರವರ ಪತ್ರ ಸಂಖ್ಯೆ: ಸಂ/ಸನಿಗ್ರೇಡ್-1/ಮೈ/ಶಿಕ್ಷಣ/ಆರ್/ 2023-24 ದಿನಾಂಕ 03.10.2023.

******

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, 2023-24ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡಿರುವುದರಿಂದ ಮೈಸೂರು ವಿಶ್ವವಿದ್ಯಾನಿಲಯದ ಮೈಸೂರು ತಾಲ್ಲೂಕಿನ ವ್ಯಾಪ್ತಿಗೊಳಪಡುವ ಸ್ನಾತಕ, ಸ್ನಾತಕೋತ್ತರ ಹಾಗೂ ಅಧ್ಯಯನ ವಿಭಾಗಗಳು ತಮ್ಮ ಸೂಚನಾ ಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿಗಳಿಗೆ ಮಾಹಿತಿ ನೀಡುವಂತೆ ತಿಳಿಸಲಾಗಿದೆ. ವಿಶ್ವವಿದ್ಯಾನಿಲಯದ ವೆಬ್‌ಸೈಟ್ (www.uni-mysore.ac.in)ನಿಂದ ಪತ್ರದ ಪತ್ರಿಗಳನ್ನು ಪಡೆದುಕೊಳ್ಳುವಂತೆ ಸಹ ಈ ಮೂಲಕ ತಿಳಿಸಲಾಗಿದೆ.

2/11/2023
ಕುಲಸಚಿವ
ಕುಲಸಚಿವ
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

**ಇವರಿಗೆ;**

1. ಮೈಸೂರು ತಾಲ್ಲೂಕು ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಹಾಗೂ ಸ್ನಾತಕೋತ್ತರ ಕಾಲೇಜುಗಳ ಪ್ರಾಂಶುಪಾಲರುಗಳಿಗೆ,
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ವಿಭಾಗಗಳು, ಮಾನಸಗಂಗೋತ್ರಿ, ಮೈಸೂರು.
4. ಕುಲಸಚಿವ (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಎಲ್ಲಾ ನಿಕಾಯದ ಡೀನರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ನಿರ್ದೇಶಕರು, ಯೋಜನೆ, ಉಸ್ತುವಾರಿ ಮತ್ತು ಮೌಲ್ಯಮಾಪನ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ನಿರ್ದೇಶಕರು, ಮೈಸೂರು ವಿಶ್ವವಿದ್ಯಾನಿಲಯ ತಾಂತ್ರಿಕ ಕಾಲೇಜು, ಮಾನಸಗಂಗೋತ್ರಿ, ಮೈಸೂರು.
9. ಆಡಳಿತಾಧಿಕಾರಿಗಳು, ಆಡಳಿತಾಧಿಕಾರಿಗಳ ಕಛೇರಿ, ಮಾನಸಗಂಗೋತ್ರಿ, ಮೈಸೂರು.
10. ವಿಶೇಷಾಧಿಕಾರಿಗಳು, ಕುಲಪತಿಗಳ ಕಛೇರಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
11. ಸಂಯೋಜಕರು, ಐ.ಸಿ.ಡಿ., ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕಾಗಿ ಕೋರಿದೆ.
12. ಎಲ್ಲಾ ಉಪ ಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು, ಆಡಳಿತ ವಿಭಾಗ ಮತ್ತು ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
14. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

**ಸಹಾಯಕ ನಿರ್ದೇಶಕರ ಗ್ರೇಡ್-1 ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಮೈಸೂರು ತಾಲ್ಲೂಕು**

ಡಾ॥ ಬಾಬು ಜಗಜೀವನರಾಂ ಭವನ ಕಟ್ಟಡ, ಆದಿಪಂಪ ರಸ್ತೆ ಒಂಟಿ ಕೊಪ್ಪಲು ಪೂರ್ವ, ಬಡಾವಣೆ ಪಡುವಾರಹಳ್ಳಿ
ಮೈಸೂರು-12. ದೂರವಾಣಿ ಸಂಖ್ಯೆ-0821-2520910 Email-tswomys@gmail.com

---

ಸಂ/ಸನಿಗ್ರೇಡ್-1/ಮೈ/ಶಿಕ್ಷಣ/ಸಿಆರ್ /2023-24 ದಿನಾಂಕ :03-10-2023

**ರವರಿಗೆ,**

ರಿಜಿಸ್ಟ್ರಾರ್
ಮೈಸೂರು ವಿಶ್ವವಿದ್ಯಾನಿಲಯ
ಮಾನಸ ಗಂಗೋತ್ರಿ
ಮೈಸೂರು.

ಮಾನ್ಯರೆ,

**ವಿಷಯ:** **ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ** 2023-24ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ **ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ** ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡಿರುವ ಬಗ್ಗೆ.

*******

ವಿಷಯಕ್ಕೆ ಸಂಬಂಧಿಸಿದಂತೆ 2023-24ನೇ ಸಾಲಿಗೆ ಪೋಷಕರ ವಾರ್ಷಿಕ ವರಮಾನ 2.5 ಲಕ್ಷದೊಳಗಿರುವ ಮೈಸೂರು ತಾಲ್ಲೂಕು ವ್ಯಾಪ್ತಿಯ ಎಲ್ಲಾ ಪದವಿ/ಸ್ನಾತಕೋತ್ತರ ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕಾಗಿ **ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ssp.postmatric.karnataka.gov.in ನಲ್ಲಿ** ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ನೋಂದಣಿ (ಒಮ್ಮೆ ಮಾತ್ರ) – ಈ ಹಿಂದಿನ ವರ್ಷದಲ್ಲಿ **ssp** ಮೂಲಕ ವಿದ್ಯಾರ್ಥಿವೇತನ ಪಡೆದಿದ್ದಲ್ಲಿ ನೋಂದಣಿ ಪ್ರಕ್ರಿಯೆ ಅಗತ್ಯವಿಲ್ಲ. ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಲಾಗಿನ್ ಆಗಿ ವಿದ್ಯಾರ್ಥಿ ಲಾಗಿನ್‌ನಲ್ಲಿ ನೇರವಾಗಿ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ನಂತರ **Acknowledgement print** ಮತ್ತು **Aadhar Consent Form** ನ್ನು ತಮ್ಮ ವ್ಯಾಪ್ತಿಯ ವಿದ್ಯಾಸಂಸ್ಥೆಗಳಿಗೆ ವಿದ್ಯಾರ್ಥಿಗಳು ನೀಡುವಂತೆ ಸೂಚಿಸುವುದು. ಅರ್ಜಿ ಸಲ್ಲಿಸುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಅವರವರ ಬ್ಯಾಂಕಿಗೆ ಭೇಟಿ ನೀಡಿ ಆಧಾರನ್ನು ಸಂಖ್ಯೆಯನ್ನು **NPCI ಗೆ ಕಡ್ಡಾಯವಾಗಿ ಜೋಡಣೆ ಮಾಡಿಸಿ,** ಖಾತೆಗೆ ಸೀಡ್ ಮಾಡಿಸುವಂತೆ ಕ್ರಮ ವಹಿಸುವುದು. ಈ ಬಗ್ಗೆ ತಮ್ಮ ವ್ಯಾಪ್ತಿಯ ವಿವಿಧ ಕೋರ್ಸುಗಳ ಎಲ್ಲಾ ವಿಭಾಗಗಳ ಸೂಚನಾ ಫಲಕದಲ್ಲಿ ಮತ್ತು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಎಲ್ಇಡಿ ಸ್ಕ್ರೀನ್‌ನಲ್ಲಿ ಪ್ರದರ್ಶಿತವಾಗುವಂತೆ ಕ್ರಮವಹಿಸಿ, ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಸೂಕ್ತ ಮಾಹಿತಿಯನ್ನು ನೀಡುವಂತೆ ತಮ್ಮ ವ್ಯಾಪ್ತಿಯ ವಿದ್ಯಾಸಂಸ್ಥೆಗಳಿಗೆ ಸೂಚಿಸಲು ಈ ಮೂಲಕ ತಮ್ಮನ್ನು ಕೋರಿದೆ.

AC-2(S) 9/10/23

DR(AC) A.O. Prof. Barappa Nodal Officer

Registrar Personal Section, University of Mysore — RP 592, Dt. 9.10.23

ತಮ್ಮ ನಂಬುಗೆಯ

ಸಹಾಯಕ ನಿರ್ದೇಶಕರು ಗ್ರೇಡ್-1
ಸಮಾಜ ಕಲ್ಯಾಣ ಇಲಾಖೆ
ಮೈಸೂರು ತಾಲ್ಲೂಕು ಮೈಸೂರು.

**ಪ್ರತಿಯನ್ನು**

1. ಉಪನಿರ್ದೇಶಕರು (ಶಿಕ್ಷಣ), ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಕಛೇರಿ ಪ್ರತಿ.

ಸಹಾಯಕ ನಿರ್ದೇಶಕರು ಗ್ರೇಡ್-1
ಸಮಾಜ ಕಲ್ಯಾಣ ಇಲಾಖೆ,
ಮೈಸೂರು ತಾಲ್ಲೂಕು, ಮೈಸೂರು

ಕರ್ನಾಟಕ ಸರ್ಕಾರ

**ಸಹಾಯಕ ನಿರ್ದೇಶಕರ ಗ್ರೇಡ್-1 ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಮೈಸೂರು ತಾಲ್ಲೂಕು**

ಡಾ॥ ಬಾಬು ಜಗಜೀವನರಾಂ ಭವನ ಕಟ್ಟಡ, ಆದಿಪಂಪ ರಸ್ತೆ ಒಂಟಿ ಕೊಪ್ಪಲು ಪೂರ್ವ, ಬಡಾವಣೆ ಪಡುವಾರಹಳ್ಳಿ, ಮೈಸೂರು
ಮೈಸೂರು-10, ದೂರವಾಣಿ ಸಂಖ್ಯೆ-0821-2520910 Email-mail-tswomys@gmail.com

---

ಸಂ/ಸನಿಗ್ರೇಡ್-1/ಮೈ/ಶಿಕ್ಷಣ /ಸಿಆರ್ /2023-24 ದಿನಾಂಕ : 03-10-2023

ರವರಿಗೆ,

ಕುಲಸಚಿವರು /ಪ್ರಾಂಶುಪಾಲರುಗಳು
/ಆಡಳತಾಧಿಕಾರಿಗಳು/ನಿರ್ದೇಶಕರುಗಳು/
ಜಂಟಿ ನಿರ್ದೇಶಕರು/ಉಪನಿರ್ದೇಶಕರು/
ಡೀನ್/ವಿದ್ಯಾಸಂಸ್ಥೆಯ ಮುಖ್ಯಸ್ಥರುಗಳು
ಮೈಸೂರು ಜಿಲ್ಲಾ ವ್ಯಾಪ್ತಿಗೆ ಸಂಬಂಧಪಟ್ಟ
ಎಲ್ಲಾ ಮೆಟ್ರಿಕ್ ನಂತರದ ವಿದ್ಯಾಸಂಸ್ಥೆಗಳು

ಮಾನ್ಯರೆ,

**ವಿಷಯ** : ಮೈಸೂರು ಜಿಲ್ಲೆಯಲ್ಲಿ 2023-24ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಂದರ್ಭದಲ್ಲಿ ಪ್ರವೇಶ ಶುಲ್ಕ ಪಾವತಿಸುವಂತೆ ಒತ್ತಾಯಿಸದಿರುವ ಬಗ್ಗೆ.

**ಉಲ್ಲೇಖ**: 1. **Guidelines Post Matric Scholarship Govt. of India Ministry of Social Justice and Empowerment** (2020-2021 to 2025-26)
2.ಸರ್ಕಾರದ ಆದೇಶ ಸಂಖ್ಯೆ: **SWD/EDU/ED3/91/2023 (C OM.1098854)**, ಬೆಂಗಳೂರು, ದಿನಾಂಕ: 03-07-2023

*****

ವಿಷಯಕ್ಕೆ ಸಂಬಂಧಿಸಿದಂತೆ; ಉಲ್ಲೇಖ(1) ರ Guidelines Post Matric Scholarship Govt. of India Ministry of Social Justice and Empowerment 2020-2021 to 2025-26 ಕಂಡಿಕೆ (8) ರ 8.7 ರಲ್ಲಿ Incase of renewal students there shall be no need for fresh registration for the freeship card and a card once issued to him/her shall be valid for the entire duration of the course ಎಂದು ನಮೂದಿತವಾಗಿರುತ್ತದೆ. ಉಲ್ಲೇಖ (2)ರನ್ವಯ

1). ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರಾಗುವ ಶುಲ್ಕದ ಮೊತ್ತವನ್ನು ವಿದ್ಯಾರ್ಥಿಯು ಕಡ್ಡಾಯವಾಗಿ ಕಾಲೇಜಿಗೆ ಪಾವತಿ ಮಾಡಬೇಕಾಗಿರುತ್ತದೆ (ನಿರ್ವಹಣಾ ವೆಚ್ಚ ಹೊರತುಪಡಿಸಿ). ಸಮಾಜ ಕಲ್ಯಾಣ ಇಲಾಖೆಯು ಡಿಬಿಟಿ ಮೂಲಕ ವಿದ್ಯಾರ್ಥಿಗಳಿಗೆ ಪಾವತಿಸಿದ ವಿದ್ಯಾರ್ಥಿವೇತನದ ಬಗ್ಗೆ ಮಾಹಿತಿಯನ್ನು ಖಚಿತ ಪಡಿಸಿಕೊಂಡು ನಂತರ ವಿದ್ಯಾರ್ಥಿಯಿಂದ ಸದರಿ ಮೊತ್ತವನ್ನು ಪಾವತಿ ಮಾಡಿಸಿಕೊಳ್ಳುವುದು.

2). ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಉನ್ನತ ಶಿಕ್ಷಣದಲ್ಲಿ ವಂಚಿತರಾಗಬಾರದೆಂಬ ಉದ್ದೇಶದಿಂದ ಪ್ರವೇಶಾತಿ ಸಮಯದಲ್ಲಿ ಕಡ್ಡಾಯ ಶುಲ್ಕಗಳನ್ನು (ಮರುಪಾವತಿ ಮಾಡಲಾಗುವ/Desposit ಗಳನ್ನು ಹೊರತುಪಡಿಸಿ) ಪಾವತಿಸುವಂತೆ ಒತ್ತಾಯ ಮಾಡುವಂತಿಲ್ಲ.

3). ಕೋರ್ಸುವಾರು ನಿಗದಿಯಾಗಿರುವ ಶುಲ್ಕದ ವಿವರಗಳನ್ನು ಸಂಬಂಧಪಟ್ಟ ಇಲಾಖೆ/ವಿಶ್ವವಿದ್ಯಾಲಯ/ಮಂಡಳಿಗಳು ನೇರವಾಗಿ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ತಂತ್ರಾಂಶದಲ್ಲಿ ನಮೂದು ಮಾಡಲಾಗುತ್ತಿದ್ದು, ಈ ಕೆಳಕಂಡ ಶುಲ್ಕಗಳನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರು ಮಾಡಲಾಗುತ್ತಿದೆ.

| Sl.No. | Fee Components |
|---|---|
| 1 | Application Fee |
| 2 | Lab Fee |
| 3 | Library Fee |
| 4 | Sports Fee |
| 5 | Study Room Fee |
| 6 | Tution Fee |
| 7 | Transfer Certificate Fee |
| 8 | Study Certificate Fee |
| 9 | Magazine Calendar Fee |
| 10 | Medical Examination Fee |
| 11 | Union Fee |
| 12 | ID Card Fee |
| 13 | Exam Fee |
| 14 | Lab Exam Fee |
| 15 | Registration Fee |
| 16 | Sports Development Fee |
| 17 | OMR Fee |
| 18 | Marks card Fee |
| 19 | Admission Fee |
| 20 | Student Welfare Fund |
| 21 | Teachers Benefit Fund |
| 22 | Bharat Scouts & Guides Rover Ranger Fee |
| 23 | Indian Red Cross Organization Fee |
| 24 | NSS Fee |
| 25 | Development Fee (Only for Govt. Colleges) |

4). ಕೌನ್ಸಿಲಿಂಗ್ ಸೀಟುಗಳಿಗೆ ಸಂಬಂಧಿಸಿದಂತೆ, ಸರ್ಕಾರಿ ಕೋಟಾ ಸೀಟುಗಳಿಗೆ ವಿಶ್ವವಿದ್ಯಾಲಯ ಹಾಗೂ KEA ನಿಗದಿಪಡಿಸಿದ ಶುಲ್ಕಗಳನ್ನು ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರು ಮಾಡಲು ಕ್ರಮವಹಿಸಲಾಗಿದ್ದು, ಸರ್ಕಾರಿ ಕೋಟಾ ಸೀಟಿನಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಂದ ಇತರೆ ಯಾವುದೇ ಶುಲ್ಕಗಳನ್ನು ವಸೂಲು ಮಾಡುವಂತಿಲ್ಲ.

5). ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮೇಲ್ಕಂಡ Fee Components ಗಳನ್ನು ಮಾತ್ರ ಮಂಜೂರು ಮಾಡಲಾಗುತ್ತಿದ್ದು ಇಲಾಖೆ/ಮಂಡಳ/ವಿಶ್ವವಿದ್ಯಾಲಯಗಳು ಕೋರ್ಸುವಾರು ನಿಗದಿಯಾದ ಶುಲ್ಕದ ವಿವರಗಳನ್ನು ಕಡ್ಡಾಯವಾಗಿ ನಿಗದಿತ ಅವಧಿಯೊಳಗೆ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ನಮೂದಿಸುವುದು. ಒಮ್ಮೆ ಸಮಾಜ ಕಲ್ಯಾಣ ಇಲಾಖೆಯಿಂದ ಅನುಮೋದನೆಯಾದ ಶುಲ್ಕದ ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಸಾಧ್ಯವಿರುವುದಿಲ್ಲ. ಆದ್ದರಿಂದ, ಸಂಬಂಧಪಟ್ಟ ಇಲಾಖೆ/ಮಂಡಳ/ವಿಶ್ವವಿದ್ಯಾಲಯಗಳು ಕಡ್ಡಾಯವಾಗಿ Fee Components ಪರಿಶೀಲಿಸಿ ನಮೂದು ಮಾಡುವುದು. ಒಂದು ವೇಳೆ ಶುಲ್ಕಗಳು ಕಡಿಮೆ ಮಂಜೂರಾದಲ್ಲಿ ಸಂಬಂಧಪಟ್ಟ ಇಲಾಖೆ/ಮಂಡಳ/ವಿಶ್ವವಿದ್ಯಾಲಯಗಳೇ ನೇರ ಹೊಣೆಗಾರರಾಗಿರುತ್ತಾರೆ.

6). ವಿದ್ಯಾರ್ಥಿಯು ಆಯಾ ಕೋರ್ಸಿಗೆ ದಾಖಲಾದ ದಿನದಿಂದಲೇ ವಿದ್ಯಾರ್ಥಿಗೆ University Reg Number ಅನ್ನು ನೀಡುವುದು ಹಾಗೂ ದಾಖಲಾದ ದಿನದಿಂದಲೇ ವಿದ್ಯಾರ್ಥಿಯು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.

7). ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ವಿದ್ಯಾರ್ಥಿಯಿಂದ ಯಾವುದೇ ಕಡ್ಡಾಯ ಶುಲ್ಕ ಪಡೆಯದೇ UUCMS ನಲ್ಲಿ ದಾಖಲೆ ಮಾಡಿಕೊಳ್ಳುವುದು ಹಾಗೂ ಅಂದೇ UUCMS ಸಂಖ್ಯೆಯನ್ನು ವಿದ್ಯಾರ್ಥಿಗಳಿಗೆ ವಿತರಿಸುವುದು. ತಾಂತ್ರಿಕ ಶಿಕ್ಷಣ ಸಂಸ್ಥೆಗಳೂ ಸಹ ಇದರಂತೆಯೇ ಕ್ರಮವಹಿಸುವುದು.

8). ಅದೇ ರೀತಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ದಾಖಲಾಗುತ್ತಿರುವ ವಿದ್ಯಾರ್ಥಿಗಳಿಗೂ ಸಹ ದಾಖಲಾದ ದಿನಾಂಕದಂದೇ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.

9). ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳ ಸಂಬಂಧ (ಉದಾ: Karnataka Law University Ext.) e-Attestation ಮೂಲಕ ದಾಖಲಾತಿ ದಿನದಂದೇ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.

10. ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿಯಲ್ಲಿ ಉಲ್ಲೇಖಿಸಿರುವಂತೆ Free-Ship Card ನ್ನು ಕಡ್ಡಾಯವಾಗಿ ಮಾನ್ಯ ಮಾಡುವುದು ಎಲ್ಲಾ ಕಾಲೇಜುಗಳ ಜವಾಬ್ದಾರಿಯಾಗಿರುತ್ತದೆ. Free-Ship Card ನಲ್ಲಿ ವಿದ್ಯಾರ್ಥಿಯು ಸಲ್ಲಿಸಿರುವ ದೃಢೀಕರಣದಂತೆ ವಿದ್ಯಾರ್ಥಿಗೆ ವಿದ್ಯಾರ್ಥಿವೇತನ ಮೊತ್ತ ಪಾವತಿಯಾದ ನಂತರದಲ್ಲಿ ವಿದ್ಯಾರ್ಥಿಯಿಂದ ಕಡ್ಡಾಯವಾಗಿ ಭರಿಸಿಕೊಳ್ಳುವುದು. ಒಂದು ವೇಳೆ ವಿದ್ಯಾರ್ಥಿಯು ತನ್ನ ಖಾತೆಗೆ ವಿದ್ಯಾರ್ಥಿವೇತನ ಮೊತ್ತ ಜಮೆಯಾದ ನಂತರದಲ್ಲೂ ಕಾಲೇಜಿಗೆ ಶುಲ್ಕವನ್ನು ಮರುಪಾವತಿ ಮಾಡದೇ ಇದ್ದಲ್ಲಿ ಅಂತಹ ವಿದ್ಯಾರ್ಥಿವೇತನ ಜಮೆಯಾಗಿರುವ ಬಗ್ಗೆ ದೃಢೀಕರಿಸಿಕೊಂಡು ಅಂತಹ ವಿದ್ಯಾರ್ಥಿಯ ವಿರುದ್ಧ ಸಂಬಂಧಪಟ್ಟ ಕಾಲೇಜು ಸೂಕ್ತ ಕ್ರಮ ತೆಗೆದುಕೊಳ್ಳುವುದು.

11). SSP ತಂತ್ರಾಂಶವನ್ನು ನಿರ್ವಹಣೆ ಮಾಡುತ್ತಿರುವ ಪ್ರಾಜೆಕ್ಟ್ ನಿರ್ದೇಶಕರು, SSP ರವರು ಸದರಿ ಎಲ್ಲಾ ಮೆಟ್ರಿಕ್ ನಂತರದ ಕೋರ್ಸುಗಳ ಸಂಬಂಧ ಯಾವುದೇ ರೀತಿಯ Bonafide Data ಗೆ ನಿರೀಕ್ಷಿಸದೇ ಹಾಗೂ ವಿದ್ಯಾರ್ಥಿಗಳಿಗೆ Univsrsity Reg. Number ಒತ್ತಾಯ ಮಾಡದೇ ಕಡ್ಡಾಯವಾಗಿ ವಿದ್ಯಾರ್ಥಿವೇತನಕ್ಕೆ ಅರ್ಜಿಯನ್ನು ದಾಖಲಾದ ದಿನಾಂಕಂದು ಪಡೆದು, ಅದೇ ದಿನ ಅರ್ಜಿ ಸಲ್ಲಿಸಲು ವಿದ್ಯಾರ್ಥಿಗೆ ಅವಕಾಶ ಮಾಡಿಕೊಡುವುದು ಹಾಗೂ ವಿದ್ಯಾರ್ಥಿ ಅರ್ಜಿ ಸಲ್ಲಿಸಿದ ದಿನದಂದೇ ಸಂಬಂಧಪಟ್ಟ ಇಲಾಖೆಯು ವಿದ್ಯಾರ್ಥಿವೇತನ ಮಾಡಲು ಅವಕಾಶ ಮಾಡಿಕೊಡುವುದು. ಯಾವುದೇ ವಿಳಂಬಕ್ಕೆ ಹಾಗೂ ತಾಂತ್ರಿಕ ದೋಷಗಳಿಗೆ ಆಸ್ಪದ ನೀಡುವಂತಿಲ್ಲ.

12). SSP ತಾಂತ್ರಿಕ ದೋಷ ಹಾಗೂ University Reg Number ಕೋರಿಕೆಯಿಂದಾಗಿ ವಿದ್ಯಾರ್ಥಿಗಳು ಸಕಾಲದಲ್ಲಿ ಅರ್ಜಿ ಸಲ್ಲಿಸಲು ತೊಂದರೆಯಾಗುತ್ತಿದೆ. SSP ರವರ ಈ ಕ್ರಮದಿಂದಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಸಾಲಿನಲ್ಲಿಯೇ ಅವರ ವಿದ್ಯಾರ್ಥಿವೇತನ ದೊರೆಯುವುದು ಕಷ್ಟಸಾಧ್ಯವಾಗಿದೆ. ಈ ಹಿನ್ನಲೆಯಲ್ಲಿ ಆಯಾ ಕಾಲೇಜುಗಳಿಗೆ e-Attestation ಮುಖಾಂತರ ವಿದ್ಯಾರ್ಥಿಗಳ ಪರಿಶೀಲನೆ ಕಡ್ಡಾಯವಾಗಿ ಅವಕಾಶ ಮಾಡಿಕೊಡುವುದು SSP ಜವಾಬ್ದಾರಿಯಾಗಿರುತ್ತದೆ. ಆದ್ದರಿಂದ ಖಾಸಗೀ ಕಾಲೇಜುಗಳಲ್ಲಿ ದಾಖಲಾದ ದಿನದಂದೇ ಬೋಧನಾ ಶುಲ್ಕ ಪಾವತಿ ಮಾಡಲು ಒತ್ತಾಯ ಮಾಡಬಾರದು.

13). ದಾಖಲಾತಿ ಸಮಯದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪ.ಜಾತಿ ವಿದ್ಯಾರ್ಥಿಯಿಂದ ಯಾವುದೇ ಕಡ್ಡಾಯ ಶುಲ್ಕ ಪಾವತಿ ಮಾಡುವಂತೆ ಒತ್ತಾಯ ಮಾಡಬಾರದೆಂದು ಶಿಕ್ಷಣ ಸಂಸ್ಥೆಗಳಿಗೆ ಸೂಚಿಸಿದೆ.

ಆದ್ದರಿಂದ ಮೈಸೂರು ತಾಲ್ಲೂಕಿನ ಎಲ್ಲಾ ಸರ್ಕಾರಿ /ಅನುದಾನ/ ಅನುದಾನ ರಹಿತ / ಖಾಸಗಿ/ ವಿಶ್ವವಿದ್ಯಾನಿಲಯಗಳ ಪ್ರಾಂಶುಪಾಲರುಗಳು/ ಆಡಳಿತಾಧಿಕಾರಿ/ ಡೀನ್/ ನಿರ್ದೇಶಕರು/ ಮುಖ್ಯಸ್ಥರುಗಳಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ 2023-24ನೇ ಸಾಲಿಗೆ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ದಾಖಲಾತಿ ಸಂದರ್ಭದಲ್ಲಿ ಯಾವುದೇ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಶುಲ್ಕ ಪಾವತಿಸುವಂತೆ ಒತ್ತಾಯಿಸದೆ, ಪ್ರವೇಶಾತಿ ನೀಡಲು ಸೂಚಿಸಿದೆ. Renewal ವಿದ್ಯಾರ್ಥಿಗಳ ಹಿಂದಿನ ವರ್ಷದ Freeship card ನ್ನು ಪ್ರವೇಶಾತಿಗೆ ಪರಿಗಣಿಸಲು ಸೂಚಿಸುತ್ತಾ, ಸಮಾಜ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿಗಳ ಖಾತೆಗೆ ವಿದ್ಯಾರ್ಥಿವೇತನ ಮಂಜೂರಾದ ನಂತರ ನಿಯಮಾನುಸಾರ ವಿದ್ಯಾರ್ಥಿಗಳಿಂದ ಶುಲ್ಕಗಳನ್ನು ಪಡೆಯುವುದು. ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವ ಸಂದರ್ಭದಲ್ಲಿ ಮೇಲ್ಕಂಡಂತೆ ಕ್ರಮವಹಿಸದೇ ಅನಧಿಕೃತವಾಗಿ ಶುಲ್ಕ ವಸೂಲು ಮಾಡಿದ್ದಲ್ಲಿ ಅಂತಹ ಪ್ರಾಂಶುಪಾಲರ ವಿರುದ್ಧ ಅನುಸೂಚಿತ ಜಾತಿ ಬುಡಕಟ್ಟುಗಳ ದೌರ್ಜನ್ಯ ಪ್ರತಿಬಂಧಕ ಅಧಿನಿಯಮ 1989 ರನ್ವಯ ಕ್ರಮಕೈಗೊಳ್ಳಲಾಗುವುದು.

ತಮ್ಮ ನಂಬುಗೆಯ

ಸಹಾಯಕ ನಿರ್ದೇಶಕರು ಗ್ರೇಡ್-1
ಸಮಾಜ ಕಲ್ಯಾಣ ಇಲಾಖೆ
ಮೈಸೂರು ತಾಲ್ಲೂಕು, ಮೈಸೂರು

ಪ್ರತಿಯನ್ನು:

1. ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಕಛೇರಿ ಪ್ರತಿ.

ಸಹಾಯಕ ನಿರ್ದೇಶಕರು ಗ್ರೇಡ್-1
ಸಮಾಜ ಕಲ್ಯಾಣ ಇಲಾಖೆ
ಮೈಸೂರು ತಾಲ್ಲೂಕು, ಮೈಸೂರು